**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21** **ದಿನಾಂಕ : 10–11–2020**

# ಮಾಧ್ಯಮ ಆಮಂತ್ರಣ

**1) ರಾಜ್ಯ ಪೊಲೀಸ್ ಇಲಾಖೆಗೆ 751 ದ್ವಿ–ಚಕ್ರ ವಾಹನಗಳ ಹಸ್ತಾಂತರ ಸಮಾರಂಭ :**

ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು

**ಮುಖ್ಯ ಅತಿಥಿಗಳು:**
ಬಸವರಾಜ ಬೊಮ್ಮಾಯಿ, ಗೃಹ ಸಚಿವರು.

**ದಿನಾಂಕ : 11–11–2020, ಬುಧವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ**

**ಸ್ಥಳ : ವಿಧಾನಸೌಧದ ಬೃಹತ್ ಮೆಟ್ಟಿಲುಗಳ ಬಳಿ, ಬೆಂಗಳೂರು.**

**2) ಪತ್ರಿಕಾಗೋಷ್ಠಿ :**

**ಮುಖ್ತಾರಹುಸೇನ್ ಎಫ್. ಪಠಾಣ,**
**ಅಧ್ಯಕ್ಷರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ**

**ದಿನಾಂಕ : 11–11–2020 ಬುಧವಾರ : ಸಮಯ : ಅಪರಾಹ್ನ 12–00 ಗಂಟೆಗೆ**
**ಸ್ಥಳ : ಅಧ್ಯಕ್ಷರ ಕೊಠಡಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ**
**ವಿಶ್ವೇಶ್ವರಯ್ಯ ಕೇಂದ್ರ, 12 ನೇ ಮಹಡಿ, ಮುಖ್ಯ ಗೋಪುರ,**
**ಡಾ : ಬಿ. ಆರ್. ಅಂಬೇಡ್ಕರ್ ವೀದಿ, ಬೆಂಗಳೂರು –560 001**

# ಪತ್ರಿಕಾ ಪ್ರಕಟಣೆ

## ರಾಜ್ಯಸಭಾ ಉಪ ಚುನಾವಣೆ –2020

**ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ):**

ರಾಜ್ಯ ಸಭೆಯ ಸದಸ್ಯರಾಗಿದ್ದ ಅಶೋಕ್ ಗಸ್ತಿ ಅವರು ನಿಧನ ಹೊಂದಿದ್ದರಿಂದ ತೆರವಾದ ಸ್ಥಾನಕ್ಕೆ ದಿನಾಂಕ 01–12–2020 ರಂದು ಉಪ ಚುನಾವಣೆ ನಡೆಯಲಿದ್ದು, ಕೋವಿಡ್–19 ಹಿನ್ನಲೆಯಲ್ಲಿ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿ ಹಾಗೂ ಚುನಾವಣಾಧಿಕಾರಿ ಶ್ರೀಮತಿ ಎಂ.ಕೆ.ವಿಶಾಲಾಕ್ಷಿ ಅವರು ತಿಳಿಸಿದರು.

ರಾಜ್ಯಸಭಾ ಚುನಾವಣೆಯ ಸಂದರ್ಭದಲ್ಲಿ ಕೈಗೊಳ್ಳಲಾದ ಕ್ರಮಗಳು ಕುರಿತು ವಿವರಣೆ ನೀಡಲು ಇಂದು ವಿಧಾನಸೌಧದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಕರ್ನಾಟಕ ವಿಧಾನ ಸಭೆಯ ಚುನಾಯಿತ ಸದಸ್ಯರಿಂದ ರಾಜ್ಯಸಭೆಗೆ ಒಬ್ಬ ಸದಸ್ಯರನ್ನು ಆಯ್ಕೆ ಮಾಡಲಾಗುತ್ತದೆ. ಚುನಾವಣಾ ಪ್ರಕ್ರಿಯೆಯ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಅಭ್ಯರ್ಥಿಯ ಜೊತೆಗೆ ಗರಿಷ್ಠ 2 ಜನರಿಗೆ ಮಾತ್ರ ಪ್ರವೇಶ ನೀಡಲಾಗುವುದು. ಚುನಾವಣಾಧಿಕಾರಿಯ ಕಛೇರಿಯ ಒಳಗೆ ಪ್ರವೇಶಿಸುವವರು ಕಡ್ಡಾಯವಾಗಿ ಮಾಸ್ಕ್ ಧರಿಸಿರಬೇಕು. ಕೈಗಳನ್ನು ಸ್ವಚ್ಚಗೊಳಿಸಲು ಸ್ಯಾನಿಟೈಸರ್ ವ್ಯವಸ್ಥೆಗೊಳಿಸಲಾಗಿರುತ್ತದೆ. ಪ್ರತಿಯೊಬ್ಬರನ್ನು ಥರ್ಮಲ್ ಸ್ಕ್ರೀನಿಂಗ್ ಗೆ ಒಳಪಡಿಸಿ ಒಳಗೆ ಬಿಡಲಾಗುವುದು. ಸಾಮಾಜಿಕ ಅಂತರವನ್ನು ಕಡ್ಡಾಯವಾಗಿ ಕೈಗೊಳ್ಳಲು ಸೂಚಿಸಲಾಗುವುದು ಎಂದು ಹೇಳಿದರು.

ಈ ಉಪ ಚುನಾವಣೆಗೆ ಚುನಾವಣಾಧಿಕಾರಿಯಾಗಿ ಕರ್ನಾಟಕ ವಿಧಾನ ಸಭೆಯ ಕಾರ್ಯದರ್ಶಿಯಾದ (ಪ್ರ) ಶ್ರೀಮತಿ ಎಂ.ಕೆ. ವಿಶಾಲಾಕ್ಷಿ ಹಾಗೂ ಉಪ ಕಾರ್ಯದರ್ಶಿಯಾದ ವಿ. ಮೋಹನಮೂರ್ತಿ ಅವರು ಸಹಾಯಕ ಚುನಾವಣಾಧಿಕಾರಿಯಾಗಿ ನೇಮಕಗೊಂಡಿದ್ದಾರೆ.

ನಾಮಪತ್ರಗಳನ್ನು ದಿನಾಂಕ 11–11–2020 ರಿಂದ 18–11–2020 ರವರೆಗೆ ಸಲ್ಲಿಸಬಹುದಾಗಿದೆ. (ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ) ನಾಮಪತ್ರಗಳ ಪರಿಶೀಲನೆ ದಿನಾಂಕ 19–11–2020 ರಂದು ಬೆಳಿಗ್ಗೆ 11–00 ಗಂಟೆಗೆ ನಡೆಯಲಿದೆ. ನಾಮಪತ್ರಗಳನ್ನು ದಿನಾಂಕ 23–11–2020 ರೊಳಗೆ ವಾಪಸ್ಸು ಪಡೆಯಬಹುದಾಗಿದೆ. ಚುನಾವಣೆಯು ಅವಶ್ಯವಿದ್ದಲ್ಲಿ

**ದಿನಾಂಕ 1-12-2020 ರಂದು ವಿಧಾನ ಸೌಧದ ಮೊದಲನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 106 ರಲ್ಲಿ ಬೆಳಿಗ್ಗೆ 9-00 ರಿಂದ ಸಂಜೆ 4-00 ಗಂಟೆಯವರೆಗೆ ನಡೆಯಲಿದೆ.**

**ಸದರಿ ಚುನಾವಣೆಗೆ ವಿಧಾನ ಸಭೆಗೆ ಚುನಾಯಿತಗೊಂಡಿರುವ 222 ಸದಸ್ಯರು (ರಾಜರಾಜೇಶ್ವರಿ ನಗರ ಹಾಗೂ ಶಿರಾ ಕ್ಷೇತ್ರಗಳು ಒಳಗೊಂಡಂತೆ) ಮತದಾರರಾಗಿರುತ್ತಾರೆ. ಎರಡು ಕ್ಷೇತ್ರಗಳ ಚುನಾವಣೆ ನಡೆಯಬೇಕಾಗಿರುತ್ತದೆ (ಮಸ್ಕಿ ಮತ್ತು ಬಸವಕಲ್ಯಾಣ)**

**ಕೊರೋನಾ ವೈರಸ್ ಕೋವಿಡ್ 19 ರ ಹಿನ್ನೆಲೆಯಲ್ಲಿ ಸದರಿ ಚುನಾವಣೆಗೆ ಕೆಳಕಂಡ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**

**ಚುನಾವಣಾಧಿಕಾರಿಯವರ ಕಚೇರಿಯಲ್ಲಿ ನಾಮಪತ್ರಗಳನ್ನು ಸಲ್ಲಿಸುವ ಸಂದರ್ಭದ ಚಿತ್ರೀಕರಣವನ್ನು ವಾರ್ತಾ ಇಲಾಖೆಯವರ ಸಹಯೋಗದೊಡನೆ ಚಿತ್ರೀಕರಿಸಿ ಅವರ ಮುಖಾಂತರ ಎಲ್ಲಾ ಮಾಧ್ಯಮಗಳಿಗೂ ನೀಡಲು ವ್ಯವಸ್ಥೆಗೊಳಿಸಲಾಗಿದೆ. ಚುನಾವಣಾಧಿಕಾರಿಯವರ ಕಚೇರಿಯ ಒಳಗೆ ಮಾಧ್ಯಮ ಮಿತ್ರರನ್ನು ಬಿಡಲು ಅನುಕೂಲವಾಗಿದ್ದು ಸಹಕರಿಸಬೇಕೆಂದು ಕೋರಲಾಗಿದೆ ಎಂದು ತಿಳಿಸಿದರು.**

## ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ):**

**ವಸತಿ ಸಚಿವ ವಿ. ಸೋಮಣ್ಣ ಅವರು ನವೆಂಬರ್ 17 ರಿಂದ 19 ರವರೆಗೆ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ನವೆಂಬರ್ 19 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಎನ್‌ಟಿಎಸ್‌ಇ&ಎನ್‌ಎಂಎಂಎಸ್ ಪರೀಕ್ಷೆಗೆ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ): 2020-21ನೇ ಸಾಲಿನ ಎನ್‌ಟಿಎಸ್‌ಇ & ಎನ್‌ಎಂಎಂಎಸ್ ಪರೀಕ್ಷೆಗಳನ್ನು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ. ವತಿಯಿಂದ ಜನವರಿ 24 ರಿಂದ ನಡೆಸಲಾಗುತ್ತಿದ್ದು, ಎನ್‌ಟಿಎಸ್‌ಇ ಪರೀಕ್ಷೆಗೆ**

10ನೇ ತರಗತಿಯಲ್ಲಿ ಪ್ರಸಕ್ತ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಶಾಲೆಗಳ ವಿದ್ಯಾರ್ಥಿಗಳು ಹಾಗೂ ಎನ್‌ಎಂಎಂಎಸ್ ಪರೀಕ್ಷೆಗೆ 8ನೇ ತರಗತಿಯಲ್ಲಿ ಪ್ರಸಕ್ತ ವರ್ಷದಲ್ಲಿ ಸರ್ಕಾರಿ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆಗಳ ಶಾಲೆಗಳಲ್ಲಿ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿಗಳನ್ನು ಆನ್‌ಲೈನ್ ಮೂಲಕ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ವೆಬ್‌ಸೈಟ್‌ನಲ್ಲಿ ನವೆಂಬರ್ 30 ರೊಳಗೆ ಸಲ್ಲಿಸಬೇಕು. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿದೆ.

ಇಲಾಖೆಯ ತಾಲ್ಲೂಕು ಮತ್ತು ಜಿಲ್ಲಾ ಹಂತದ ಅಧಿಕಾರಿಗಳು ಶಾಲಾ ಮುಖ್ಯ ಶಿಕ್ಷಕರ ಸಭೆ ಕರೆದು ಸದರಿ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ಸೂಕ್ತ ಮಾರ್ಗದಶನ ನೀಡುವಂತೆ ಕೆ.ಎಸ್.ಕ್ಯು.ಎ.ಸಿ. ಯ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರಣ್ಯ ಇಲಾಖೆಯಲ್ಲಿ ಸಾಧನೆ ಮಾಡಿದ 75 ಅಧಿಕಾರಿ-ಸಿಬ್ಬಂದಿಗಳಿಗೆ ಮುಖ್ಯಮಂತ್ರಿ ಪದಕ

ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ): ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಅರಣ್ಯ ಸಂರಕ್ಷಣೆ, ಅಕ್ರಮ ಕಡಿತಲೆ, ವನ್ಯಜೀವಿ ಸಂರಕ್ಷಣೆ, ಅರಣ್ಯ ಪ್ರದೇಶವನ್ನು ಒತ್ತುವರಿದಾರರಿಂದ ತೆರವುಗೊಳಿಸುವುದು ಸೇರಿದಂತೆ ಇತರೆ ಕೆಲಸ ಕಾರ್ಯಗಳ ಮೂಲಕ ಸಾಧನೆ ಮಾಡಿದ ಅಧಿಕಾರಿ-ಸಿಬ್ಬಂದಿಗಳನ್ನು ಆಯ್ಕೆ ಮಾಡುವಂತೆ 2017ರಲ್ಲಿ ಆದೇಶವನ್ನು ಜಾರಿಗೆ ತರಲಾಗಿದೆ.

ಅದರಂತೆ ಪ್ರತಿ ವರ್ಷ 25 ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡಂತೆ 2017,2018,2019ರ ಸಾಲಿನಲ್ಲಿ 75 ಅಧಿಕಾರಿ ಸಿಬ್ಬಂದಿಗಳನ್ನು ಆಯ್ಕೆ ಮಾಡಲಾಗಿದ್ದು, ಅವರಿಗೆ ನವೆಂಬರ್ 23 ರಂದು ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಹಬ್ಬದ ಪ್ರಯುಕ್ತ ಕರಾರಸಾ ನಿಗಮದ ವತಿಯಿಂದ 1000 ಹೆಚ್ಚುವರಿ ವಿಶೇಷ ಸಾರಿಗೆ ವ್ಯವಸ್ಥೆ

**ಬೆಂಗಳೂರು, ನವೆಂಬರ್ 10 (ಕರ್ನಾಟಕ ವಾರ್ತೆ):**

ದಿನಾಂಕ 14.11.2020 ರಂದು ನರಕಚತುರ್ದಶಿ ಹಾಗೂ ದಿನಾಂಕ 16.11.2020 ರಂದು ಬಲಿಪಾಡ್ಯಮಿ ಹಬ್ಬದ ಪ್ರಯುಕ್ತ ಕರಾರಸಾ ನಿಗಮವು, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ 13.11.2020 ಹಾಗೂ 14.11.2020 ರಂದು ಬೆಂಗಳೂರಿನಿಂದ ಈ ಕೆಳಕಂಡ ಸ್ಥಳಗಳಿಗೆ 1000 ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ನಂತರ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಿನಾಂಕ: 16.11.2020ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.

- ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗೀರ್, ಬೀದರ್, ತಿರುಪತಿ ಮುಂತಾದ ಸ್ಥಳಗಳಿಗೆ ವಿಶೇಷ ಕಾರ್ಯಾಚರಣೆ.
- ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ಕಾರ್ಯಾಚರಣೆ.
- ಆಂಧ್ರಪ್ರದೇಶ/ತೆಲಂಗಾಣ ಹಾಗೂ ಕೇರಳ ರಾಜ್ಯದ ವಿವಿಧ ಸ್ಥಳಗಳಿಗೆ ಅಂದರೆ ತಿರುಪತಿ, ವಿಜಯವಾಡ, ಹೈದರಾಬಾದ್, ತಿರುವನಂತಪುರಂ, ಕೊಟ್ಟಾಯಂ ಮುಂತಾದ ಸ್ಥಳಗಳಿಗೆ ಹೋಗುವ ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ವಿಶೇಷ ಕಾರ್ಯಾಚರಣೆ ಮಾಡಲಾಗುವುದು.
- **ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.**
- **ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಕೋರಲಾಗಿದೆ.**
- ಇ–ಟಿಕೇಟ್ ಬುಕ್ಕಿಂಗ್‌ನ್ನು www.ksrtc.in ವೆಬ್ ಸೈಟ್ ಮುಖಾಂತರ ಮಾಡಬಹುದಾಗಿದೆ.
- ಸಾರ್ವಜನಿಕ ಪ್ರಯಾಣಿಕರು ಕರ್ನಾಟಕ ಹಾಗೂ ಅಂತರರಾಜ್ಯದಲ್ಲಿ ಇರುವ 706 ಗಣಕೀಕೃತ ಬುಕಿಂಗ್ ಕೌಂಟರ್‌ಗಳ ಮೂಲಕ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.
- ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟು ಕಾಯ್ದಿರಿಸಿದಲ್ಲಿ **ಶೇಕಡ 5** ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ & ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ **ಶೇಕಡ 10** ರಷ್ಟು ರಿಯಾಯಿತಿ ನೀಡಲಾಗುವುದು.
- ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕರಾರಸಾ ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.
- ಅಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು.

**KARNATAKA STATE ROAD TRANSPORT CORPORATION**

## CENTRAL OFFICE: BENGALURU

### Operation of 1000 additional buses by KSRTC during Deepavali Festival

In view of Narakachaturdashi on 14.11.2020 and Balipadyami Festival on 16.11.2020, KSRTC has made elaborate arrangements for operating 1000 extra buses as mentioned below in addition to the existing schedules to provide transport facility to the traveling public on 13.11.2020 & 14.11.2020 from Bengaluru. Later, special buses will be operated from various places of Intra & Interstate places to Bengaluru on 16.11.2020.

- Special buses will be exclusively operated from Bengaluru Kempegowda Bus Station to Dharmastala, Kukkesubramanya, Shivamogga, Hassan, Mangaluru, Kundapura, Sringeri, Horanadu, Davangere, Hubballi, Dharwad, Belagavi, Vijayapura, Gokarna, Sirsi, Karwar, Raichur, Kalaburagi, Ballari, Koppala, Yadgir, Bidar, Tirupathi and other places.
- Special buses from Mysuru Road Bus Station will be exclusively operated towards Mysuru, Hunsur, Piriyapatna, Virajpet, Kushalanagar, Madikeri.
- All premier special buses will be operated from BMTC, Bus Station, Shanthinagar to Tirupathi, Vijayawada, Hyderabad, Thiruvananthpuram, Kottayam and other places in Andhra Pradesh/Telangana and Kerala state.
- **Facility is provided to book computerized reservation tickets in advance for the special buses.**
- **Reserved passengers are requested to note the place of boarding in their reservation ticket.**
- Passengers can book tickets online by logging on to www.ksrtc.in.
- Advance reservation of tickets for the special and scheduled buses of KSRTC can be booked through 706 counters within Karnataka & in other States.
- A discount of **5%** on the fare will be extended, if four or more passenger’s book tickets in a single ticket and a discount of **10%** is offered on the return journey ticket if onward and downward journey tickets are booked simultaneously.
- The details of the special operations like place and timings of departure have been provided in the computerized advance reservation network and KSRTC website for the information of the traveling public.
- In addition to the above, special buses will be operated from all Taluk/District Bus Stands in the jurisdiction of KSRTC based on the traffic needs.